ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ. 3242/2023

ಸಿ.ಡಬ್ಲ್ಯೂ -04
ಪಿ.ಡಬ್ಲ್ಯೂ-04

ಸಾಕ್ಷಿದಾರನ ಹೆಸರು :- ಶಿವಣ್ಣ
ತಂದೆಯ ಹೆಸರು :- ನಿಂಗಯ್ಯ
ವಯಸ್ಸು :- 60 ವರ್ಷ
ಉದ್ಯೋಗ :- ಕೂಲಿ
ವಾಸ :- ಹುನಗನಹಳ್ಳಿ

**ಸಾಕ್ಷಿಗೆ ದಿಃ 09.02.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ಸ್ಥಳ ಪಂಚನಾಮೆಗೆ ನನ್ನ ಸಹಿ ಇರುತ್ತದೆ ಅದನ್ನು 2-3 ವರ್ಷಗಳ ಹಿಂದೆ ಹು.ದುರ್ಗ ಪೋಲಿಸ ಠಾಣೆಗೆ ರಾಜಿ ಹೋದಾಗ ಸಹಿ ಮಾಡಿರುತ್ತೇನೆ. ಪಂಚನಾಮೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮು. ಮಾ. ಅನ್ನು ಜಪ್ತು ಮಾಡಿರುವುದಿಲ್ಲ. ಪಂಚನಾಮೆಯನ್ನು ಈಗಾಗಲೇ ನಿ.ಪಿ 2 ಎಂದು ಗುರುತಿಸಲಾಗಿದ್ದು ಸಹಿಯನ್ನು ನಿ.ಪಿ 2 (ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 29.03.2023 ರಂದು ಬೆಳಿಗ್ಗೆ 10.30 ರಿಂದ 11.30 ಗಂಟೆಯ ಸಮಯದಲ್ಲಿ ಪೋಲಿಸರು ಸ್ಥಳ ಪಂಚನಾಮೆಯನ್ನು ಘಟನಾ ಸ್ಥಳದಲ್ಲಿ ನನ್ನ ಹಾಗೂ ಚಾಸಾ 5 ಅವರ ಸಮಕ್ಷಮ ಮಾಡಿ ಒಂದು ಮೂರು ಅಡಿ ಉದ್ದದ ಮರ ಕೊಂಬೆಯನ್ನು ಜಪ್ತು ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆಯನ್ನು ಮಾಡಿದ್ದರೂ ಸಹ ನಾನು ಸುಳ್ಳು ಹೇಳುತ್ತಿದ್ದೇನೆಎಂದರೆ ಸರಿಯಲ್ಲ. ನಾನು ಆರೋಪಿಗೆ ಸಹಾಯ

ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.